All India Radio: Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

03.04.2025 2.30 P.M.

****************

ಮುಖ್ಯಾಂಶಗಳು

- ಕೇಂದ್ರ ಜಲಶಕ್ತಿ ಸಚಿವರೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚರ್ಚೆ ; ರಾಜ್ಯದ ನೀರಾವರಿ ಯೋಜನೆಗಳಿಗೆ ಅನುಮತಿ ನೀಡುವಂತೆ ಮನವಿ
- ಅಧ್ಯಕ್ಷರ ಬದಲಾವಣೆ ಕುರಿತಂತೆ ಡಿ.ಕೆ. ಶಿವಕುಮಾರ್ ಜೊತೆ ಯಾವುದೇ ಭಿನ್ನಾಭಿಪ್ರಾಯವಿಲ್ಲ - ಗೃಹ ಸಚಿವ ಪರಮೇಶ್ವರ್
- ಅಗತ್ಯ ವಸ್ತುಗಳ ಬೆಲೆ ಏರಿಕೆ ಖಂಡಿಸಿ ಬಿಜೆಪಿ ನಡೆಸುತ್ತಿದ್ದ ಅಹೋರಾತ್ರಿ ಧರಣಿ ಅಂತ್ಯ
- ಹೆಚ್ಚಿದ ತಾಪಮಾನ ಹಿನ್ನಲೆ ; ರಾಜ್ಯದ ೯ ಜಿಲ್ಲೆಗಳಲ್ಲಿ ಸರ್ಕಾರಿ ಕಚೇರಿಯ ಕೆಲಸದ ಅವಧಿ ಬದಲಾವಣೆ ಮಾಡಿ ರಾಜ್ಯ ಸರ್ಕಾರ ಆದೇಶ
- ಬೆಂಗಳೂರು ಸೇರಿದಂತೆ ರಾಜ್ಯದ ಹಲವೆಡೆ ಮುಂದಿನ ಎರಡು ದಿನ ಮಳೆ - ಹವಾಮಾನ ಇಲಾಖೆ ಮುನ್ಸೂಚನೆ

****************

ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಅವರನ್ನು ಭೇಟಿ ಮಾಡಿ ರಾಜ್ಯದ ನೀರಾವರಿ ಯೋಜನೆಗಳ ಬಗ್ಗೆ ಚರ್ಚೆ ನಡೆಸಿದರು.

ರಾಜ್ಯದಲ್ಲಿ ಚಾಲ್ತಿಯಲ್ಲಿರುವ ನೀರಾವರಿ ಯೋಜನೆಗಳಿಗೆ ಅನುಮತಿ ಕುರಿತಂತೆ ಸಮಾಲೋಚನೆ ನಡೆಸಿದರು. ಶೀಘ್ರವೇ ಮೇಕೆದಾಟು ಹಾಗೂ ಗೋಧಾವರಿ, ಕಾವೇರಿ ಜೋಡಣಾ ಯೋಜನೆಗಳಿಗೆ ಅನುಮತಿ ನೀಡುವಂತೆ ಮನವಿ ಮಾಡಿದ್ದಾರೆ.

ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಕೇಂದ್ರ ಸಚಿವ ವಿ. ಸೋಮಣ್ಣ, ರಾಜ್ಯ ಸರ್ಕಾರದ ದೆಹಲಿ ಪ್ರತಿನಿಧಿ ಜಯಚಂದ್ರ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

****************

ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಕುರಿತಂತೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಜೊತೆ ಯಾವುದೇ ಭಿನ್ನಾಭಿಪ್ರಾಯವಿಲ್ಲ ಎಂದು ಗೃಹ ಸಚಿವ ಪರಮೇಶ್ವರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಕ್ಷದ ಕೆಲವು ನಾಯಕರು ರಾಜ್ಯಾಧ್ಯಕ್ಷರ ಬದಲಾವಣೆಗೆ ಇಂಗಿತ ವ್ಯಕ್ತಪಡಿಸಿದ್ದು, ಇನ್ನೂ ಕೆಲವರು ಡಿ.ಕೆ. ಶಿವಕುಮಾರ್ ಮುಂದುವರಿಯಬೇಕು ಎಂದು ಬಯಸಿದ್ದಾರೆ. ಆದರೆ ಹೈಕಮಾಂಡ್ ನಿರ್ಧಾರವೇ ಅಂತಿಮ ಎಂದು ಅವರು ತಿಳಿಸಿದರು.

ಇದೇ ವೇಳೆ ಸಚಿವ ರಾಜಣ್ಣ ಹನಿಟ್ರ್ಯಾಪ್ ಪ್ರಕರಣದ ಬಗ್ಗೆ ತನಿಖೆ ನಡೆಯುತ್ತಿದ್ದು, ಪ್ರತಿಕ್ರಿಯಿಸಲು ಸಚಿವರು ನಿರಾಕರಿಸಿದ್ದಾರೆ.

****************

ರಾಜ್ಯದಲ್ಲಿ ಅಗತ್ಯ ವಸ್ತುಗಳ ಬೆಲೆ ಏರಿಕೆ ಖಂಡಿಸಿ ವಿರೋಧ ಪಕ್ಷ ಬಿಜೆಪಿ ಆರಂಭಿಸಿರುವ ಅಹೋರಾತ್ರಿ ಧರಣಿ ಇಂದು ಅಂತ್ಯಗೊಂಡಿದೆ.

ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ನೇತೃತ್ವದಲ್ಲಿ ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ನಡೆಯುತ್ತಿದ್ದ ಧರಣಿಯಲ್ಲಿ ಶಾಸಕರು, ಮಾಜಿ ಸಚಿವರು, ಮಾಜಿ ಶಾಸಕರು ಸೇರಿದಂತೆ ಹಲವು ನಾಯಕರು ಪಾಲ್ಗೊಂಡಿದ್ದರು.

ಫ್ರೀಡಂ ಪಾರ್ಕ್‌ನಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ನಿವಾಸಕ್ಕೆ ಮುತ್ತಿಗೆ ಹಾಕಲು ತೆರಳುತ್ತಿದ್ದ ಬಿಜೆಪಿ ನಾಯಕರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

***************

ಏಪ್ರಿಲ್, ಮೇ ತಿಂಗಳಲಿಹೆಚ್ಚಿದ ತಾಪಮಾನ ಹಿನ್ನೆಲೆಯಲ್ಲಿ ೯ ಜಿಲ್ಲೆಗಳಲ್ಲಿ ಸರ್ಕಾರಿ ಕಚೇರಿ ಕೆಲಸದ ಅವಧಿಯಲ್ಲಿ ಬದಲಾವಣೆ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಬೀದರ್, ಕಲಬುರ್ಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಬಳ್ಳಾರಿ ಹಾಗೂ ವಿಜಯನಗರ ಹಾಗೂ ಕಿತ್ತೂರು ಕರ್ನಾಟಕದ ವಿಜಯಪುರ ಹಾಗೂ ಬಾಗಲಕೋಟೆ ಜಿಲ್ಲೆಗಳು ಸೇರಿದಂತೆ ಬಿಸಿಲಿನ ತಾಪ ಹೆಚ್ಚಿರುವ ೯ ಜಿಲ್ಲೆಗಳ ಸರ್ಕಾರಿ ಕಚೇರಿ ಕೆಲಸದ ಸಮಯವನ್ನು ಬೆಳಿಗ್ಗೆ ೮ ರಿಂದ ಮಧ್ಯಾಹ್ನ ೧.೩೦ ವರೆಗೆ ಬದಲಾಯಿಸಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ವಿಮಲಾಕ್ಷಿ ಬಿ. ಆದೇಶ ಹೊರಡಿಸಿದ್ದಾರೆ.

***************

ರಾಜ್ಯಸಭೆಯಲ್ಲಿ ಇಂದು ಮಧ್ಯಾಹ್ನ ವಕ್ಫ್ ತಿದ್ದುಪಡಿ ವಿಧೇಯಕ - ೨೦೨೫ ಅನ್ನು ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಮಂಡಿಸಿದರು. ಇಂದು ಬೆಳಗ್ಗೆ ಸದನ ಸೇರಿದಾಗ ರಾಜ್ಯಸಭಾ ಸಭಾಪತಿ ಜಗದೀಪ್ ಧನ್‌ಕರ್ ಅವರು, ಮಧ್ಯಾಹ್ನ ವಿಧೇಯಕವನ್ನು ಕೈಗೆತ್ತಿಕೊಳ್ಳುವುದಾಗಿ ಘೋಷಿಸಿದರು. ಅದರಂತೆ ವಿಧೇಯಕದ ಮೇಲಿನ ಚರ್ಚೆ ಪ್ರಗತಿಯಲ್ಲಿದೆ.

ವಕ್ಫ್ ತಿದ್ದುಪಡಿ ಮಸೂದೆಯಿಂದ ದೇಶಕ್ಕೆ ಬಹುದೊಡ್ಡ ಲಾಭವಾಗಲಿದೆ ಎಂದು ಕಿಯೋನಿಕ್ಸ್ ಮಾಜಿ ಅಧ್ಯಕ್ಷ ಹರಿಕೃಷ್ಣ ಬಂಟ್ವಾಳ ಮಂಗಳೂರಿನಲ್ಲಿ ತಿಳಿಸಿದ್ದಾರೆ.

ಧ್ವನಿ : ಕಿಯೋನಿಕ್ಸ್ ಮಾಜಿ ಅಧ್ಯಕ್ಷ ಹರಿಕೃಷ್ಣ ಬಂಟ್ವಾಳ

***************

ಮಹಾತ್ಮ ಗಾಂಧಿಜಿಯವರ ಗ್ರಾಮ ಸ್ವರಾಜ್ಯದ ಕನಸನ್ನು ನನಸು ಮಾಡುವ ಮೂಲಕ ಮೈಸೂರು ತಾಲ್ಲೂಕಿನ ದೊಡ್ಡಮಾರಗೌಡನಹಳ್ಳಿ ಗ್ರಾಮ ಪಂಚಾಯಿತಿ ೨ನೇ ಬಾರಿಗೆ ಗಾಂಧಿ ಗ್ರಾಮ ಪುರಸ್ಕಾರಕ್ಕೆ ಭಾಜನವಾಗಿದೆ.

ಪಂಚಾಯಿತಿ ವ್ಯಾಪ್ತಿಯ ಐದು ಕೆರೆಗಳ ಅಭಿವೃದ್ಧಿ, ಅಂಗನವಾಡಿ ಕೇಂದ್ರಗಳ ಅಭಿವೃದ್ಧಿ, ಪ್ರತಿ ಶಾಲೆಯಲ್ಲಿ ಡಿಜಿಟಲ್ ಲೈಬ್ರರಿ ಸ್ಥಾಪನೆ ಮತ್ತು ನಿರ್ವಹಣೆ, ಮನ್ರೇಗಾದಲ್ಲಿನ ವಿಶೇಷ ಸಾಧನೆಯಿಂದ ಇತರೆ ಗ್ರಾಮ ಪಂಚಾಯಿತಿಗಳಿಗೆ ಮಾದರಿಯೆನಿಸಿದೆ. ಈ ಎಲ್ಲಾ ಸಾಧನೆಗಳನ್ನು ಪರಿಗಣಿಸಿದ ರಾಜ್ಯ ಸರ್ಕಾರವು ೨ನೇ ಬಾರಿಗೆ ಗಾಂಧಿ ಗ್ರಾಮ ಪುರಸ್ಕಾರವನ್ನು ನೀಡಿದೆ. ೨೦೧೩-೧೪ನೇ ಸಾಲಿನಲ್ಲಿ ಈ ಪಂಚಾಯಿತಿ ಪ್ರಥಮ ಬಾರಿಗೆ ಗಾಂಧಿ ಗ್ರಾಮ ಪುರಸ್ಕಾರಕ್ಕೆ ಭಾಜನವಾಗಿತ್ತು.

***************

ಹಂಪಿ ಕನ್ನಡ ವಿಶ್ವವಿದ್ಯಾಲಯದ ೩೩ನೇ ನುಡಿ ಹಬ್ಬ ಘಟಿಕೋತ್ಸವ ಕಾರ್ಯಕ್ರಮ ನಾಳೆ ನಡೆಯಲಿದ್ದು, ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಕುಲಪತಿ ಡಾ. ಡಿ. ವಿ. ಪರಮಶಿವಮೂರ್ತಿ ತಿಳಿಸಿದ್ದಾರೆ.

ಪ್ರತಿಷ್ಠಿತ ನಾಡೋಜ ಗೌರವ ಪದವಿಯನ್ನು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಮೂವರಿಗೆ ನೀಡಲಾಗುತ್ತಿದ್ದು, ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಪದವಿ ಪ್ರದಾನ ಮಾಡಲಿದ್ದಾರೆ.

ಸರ್ವೋಚ್ಚ ನ್ಯಾಯಾಲಯ ವಿಶ್ರಾಂತ ನ್ಯಾಯಾಧೀಶರಾದ ನ್ಯಾಯಮೂರ್ತಿ ಶಿವರಾಜ್ ವಿ. ಪಾಟೀಲ್, ಚಿಂತಕ ಕುಂ. ವೀರಭದ್ರಪ್ಪ ಮತ್ತು ಪದ್ಮಶ್ರೀ ಪುರಸ್ಕೃತ ಎಂ. ವೆಂಕಟೇಶ್ ಕುಮಾರ್ ಈ ಬಾರಿಯ ನಾಡೋಜ ಗೌರವ ಪದವಿಗೆ ಭಾಜನರಾಗಿದ್ದಾರೆ.

ಕುಂಭವೀರಭದ್ರಪ್ಪ ಅವರು ಆಕಾಶವಾಣಿಯೊಂದಿಗೆ ಸಂತಸ ಹಂಚಿಕೊಂಡಿದ್ದಾರೆ.

ಧ್ವನಿ : ಕುಂ. ವೀರಭದ್ರಪ್ಪ

ಧ್ವನಿ : ಎಂ. ವೆಂಕಟೇಶ ಕುಮಾರ್

****************

ವಿಜಯಪುರ ಜಿಲ್ಲೆಯಲ್ಲಿ ಬಿಸಿಲಿನ ಪ್ರಖರತೆ ಹೆಚ್ಚಾದ ಹಿನ್ನಲೆಯಲ್ಲಿ ಹೊರಗೆ ಹೋಗುವಾಗ ರಕ್ಷಣಾತ್ಮಕ ಕನ್ನಡಕ, ಟೋಪಿ ಧರಿಸಬೇಕು. ಮನೆಯಲ್ಲಿ ತಯಾರಿಸಿದ ಪಾನೀಯಗಳನ್ನು ಹೆಚ್ಚಾಗಿ ಸೇವಿಸಬೇಕು ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ. ಸಂಪತ್ ಗುಣಾರಿ ತಿಳಿಸಿದ್ದಾರೆ.

ನವಜಾತ ಶಿಶುಗಳು ಹಾಗೂ ಚಿಕ್ಕ ಮಕ್ಕಳು, ಗರ್ಭಿಣಿಯರು, ಹೆಚ್ಚಿನ ಜಾಗರೂಕತೆ ವಹಿಸಬೇಕು. ಮಧ್ಯಾಹ್ನ ೧೨ ರಿಂದ ೩ರವರೆಗೆ ಹೊರಗೆ ಕೆಲಸ ಮಾಡಿರುವಂತೆ ಸಲಹೆ ನೀಡಿದ್ದಾರೆ.

****************

ಉಡುಪಿಯ ಇಂದ್ರಾಳಿ ರೈಲ್ವೇ ಮೇಲ್ಸೇತುವೆಯ ಅಂತಿಮ ಘಟ್ಟದ ಕಾಮಗಾರಿಗಳನ್ನು ಕೈಗೊಳ್ಳಲು ಜಿಲ್ಲಾಧಿಕಾರಿ ಡಾ. ಕೆ ವಿದ್ಯಾಕುಮಾರಿ ಸೂಚನೆ ನೀಡಿದ್ದಾರೆ.

ನಿಗದಿಪಡಿಸುವ ದಿನಾಂಕದಂದು ರೈಲ್ವೇ ಸಂಚಾರ ಸ್ಥಗಿತಗೊಳಿಸಿ, ಕಾಮಗಾರಿಯನ್ನು ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

****************

ರಾಜ್ಯದ ವಿವಿಧೆಡೆ ಇಂದು ಮಳೆಯಾಗಿದೆ. ಬಿಸಿಲಿನ ಬೇಗೆಯಿಂದ ತತ್ತರಿಸಿದ್ದ ರಾಜಧಾನಿ ಬೆಂಗಳೂರಿನಲ್ಲಿ ವರುಣ ತಂಪೆರೆದಿದ್ದಾನೆ. ಬನಶಂಕರಿ, ವಿಧಾನಸೌಧ, ಕೆ.ಆರ್. ಸರ್ಕಲ್ ಸೇರಿದಂತೆ ಹಲವು ಕಡೆ ಸುರಿದ ಮಳೆಗೆ ವಾಹನ ಸವಾರರು ಪರದಾಡುವಂತಾಗಿತ್ತು. ಇಂದು ಮತ್ತು ನಾಳೆ ಬೆಂಗಳೂರಿನಲ್ಲಿ ಮಳೆಯಾಗುವ ಸಾಧ್ಯತೆಯಿದೆ.

ಬೆಳಗಾವಿ, ಧಾರವಾಡ, ಹಾವೇರಿ, ಕೊಪ್ಪಳ, ಗದಗ ಜಿಲ್ಲೆಗಳಲ್ಲಿ ಇಂದು ಹಾಗೂ ಮುಂದಿನ ಎರಡು ದಿನ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಕರಾವಳಿ ಜಿಲ್ಲೆಗಳ ಕೆಲವೆಡೆ ಸಾಧಾರಣ ಮಳೆಯಾಗುವ ಸಂಭವವಿದೆ ಎಂದು ಭಾರತೀಯ ಹವಾಮಾನ ಇಲಾಖೆ ನಿರ್ದೇಶಕ ಸಿ.ಎಸ್. ಪಾಟೀಲ್ ಮಾಹಿತಿ ನೀಡಿದ್ದಾರೆ.

****************

ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲ್ಲೂಕಿನ ಕುಪ್ಪಹಳ್ಳಿ ಗ್ರಾಮದ ಬಾಲಕಿ ಡಿಂಪಲ್ ಸೋನಾಕ್ಷಿ ಎಂ.ಗೌಡ ಗುಜರಾತ್‌ನ ಸಮುದ್ರದಲ್ಲಿ ಬರೋಬ್ಬರಿ ೩೦ ಕಿಲೋಮೀಟರ್ ಈಜಿ ದಾಖಲೆಯೊಂದಿಗೆ ಅಗ್ರಸ್ಥಾನ ಪಡೆದು ಎಲ್ಲರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ.

ಶಿಕ್ಷಕ ಮತ್ತು ಈಜು ಕೋಚ್ ಮಂಜುನಾಥ್ ಹಾಗೂ ರೂಪಾ ದಂಪತಿ ಪುತ್ರಿ ಡಿಂಪಲ್ ಸೋನಾಕ್ಷಿ ಈಜು ಕ್ರೀಡೆಯಲ್ಲಿ ಮಾಡಿರುವ ಈ ಸಾಧನೆ ಭರವಸೆ ಮೂಡಿಸಿದೆ.

********ಮುಕ್ತಾಯ********